ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಅಕ್ರಮ ಕಟ್ಟಡಗಳ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) -

737 (775) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ನಗರಗಳಲ್ಲಿರುವ ಅಕ್ರಮ ಕಟ್ಟಡಗಳ ಸಂಖ್ಯೆ ಎಷ್ಟು; ಈ ಅಕ್ರಮ ಕಟ್ಟಡಗಳನ್ನು ತೆರವುಗೊಳಿಸಲು ಕಳೆದ 3 ವರ್ಷಗಳಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಕ್ರಮ ಕಟ್ಟಡಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ; ಅಕ್ರಮ ಕಟ್ಟಡಗಳನ್ನು ಯಾವಾಗ ನೆಲಸಮಗೊಳಿಸಲಾಗುವುದು;

(ಇ) ಕಳೆದ ಎರಡು ವರ್ಷದಲ್ಲಿ ಅಕ್ರಮವಾಗಿ ನಿರ್ಮಿಸಲಾದ ಕಟ್ಟಡಗಳು ಕುಸಿದು ಪ್ರಾಣ ಹಾನಿಯಾಗಿರುವ ಕುರಿತು ವರದಿಯಾಗಿರುವ ಪ್ರಕರಣಗಳು ಎಷ್ಟು; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮ ಏನು?